## 75. ಜೂನ್ 1 ರಿಂದ ದೇಗುಲ ದರ್ಶನ

ಲಾಕ್‌ಡೌನ್‌ನಿಂದಾಗಿ ಬಾಗಿಲು ಮುಚ್ಚಿದ್ದ ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯ ಎಲ್ಲ ದೇವಸ್ಥಾನಗಳೂ ಜೂನ್ 1 ರಿಂದ ಸಾರ್ವಜನಿಕರ ದರ್ಶನಕ್ಕೆ ಮುಕ್ತವಾಗಲಿವೆ. ಸಿಎಂ ಜೊತೆ ಸಭೆ ನಡೆಸಿದ ಮುಜರಾಯಿ ಸಚಿವ ಕೋಟ ಶ್ರೀನಿವಾಸ ಪೂಜಾರಿ, ದೈಹಿಕ ಅಂತರ ಕಾಯ್ದುಕೊಂಡು ಪೂಜೆಗೆ ಅವಕಾಶ ಮಾಡಿಕೊಡುವ ನಿರ್ಧಾರಕ್ಕೆ ಬರಲಾಗಿದೆ ಎಂದು ತಿಳಿಸಿದರು.

ದೇವಸ್ಥಾನವನ್ನು ಸಾರ್ವಜನಿಕರಿಗೆ ಮುಕ್ತಗೊಳಿಸುವ ಬಗ್ಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಸೂಚನೆ ನೀಡಲಾಗಿದೆ. ದೇವಸ್ಥಾನದಲ್ಲಿ ಹಲವು ಸೇವೆಗಳಿಗೆ ಅವಕಾಶ ಕಲ್ಪಿಸಲಾಗುವುದು. ಈಗಾಗಲೇ ಆಯ್ದ 52 ದೇವಸ್ಥಾನಗಳಲ್ಲಿ ಆನ್‌ಲೈನ್ ಸೇವೆ ಮಾಡಲು ಅವಕಾಶ ನೀಡಲಾಗಿದೆ. ಆದರೆ ಜಾತ್ರಾ ಮಹೋತ್ಸವಕ್ಕೆ ಅವಕಾಶ ಇರುವುದಿಲ್ಲ. ಮಸೀದಿ, ಚರ್ಚ್‌ಗಳನ್ನು ತೆರೆಯುವ ಬಗ್ಗೆ ಸದ್ಯಕ್ಕೆ ನಿರ್ಧಾರ ತೆಗೆದುಕೊಂಡಿಲ್ಲ. ಧಾರ್ಮಿಕ ದತ್ತಿ ಇಲಾಖೆಗೆ ಸಂಬಂಧಿಸಿದ ದೇವಾಲಯಗಳ ಬಗ್ಗೆಯಷ್ಟೇ ಚರ್ಚೆ ನಡೆದಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

ಆಂಧ್ರ ಪ್ರದೇಶದ ತಿರುಮಲ ಕರ್ನಾಟಕ ಛತ್ರಕ್ಕೆ ಸೇರಿದ ಸ್ಥಳಗಳಲ್ಲಿ ನೂತನ ವಸತಿ ಗೃಹಗಳ ನಿರ್ಮಾಣಕ್ಕೆ ರೂ.200 ಕೋಟಿಗಳ ಅನುದಾನ ಮಂಜೂರು ಮಾಡುವ ಬಗ್ಗೆ ಚರ್ಚಿಸಿ, ಕೂಡಲೇ ಕಾಮಗಾರಿ ಪ್ರಾರಂಭಕ್ಕೆ ಕ್ರಮವಹಿಸಲು ಸಿಎಂ ಯಡಿಯೂರಪ್ಪ ಸೂಚನೆ ನೀಡಿದ್ದಾರೆ. ಕಂದಾಯ ಹಾಗೂ ಮುಜರಾಯಿ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ನಿರ್ಣಯ ತೆಗೆದುಕೊಳ್ಳಲಾಗಿದ್ದು, ಕಾಮಗಾರಿಯ ಅಂದಾಜು ವೆಚ್ಚ, ಕೊಠಡಿಗಳ ಅಳತೆಯನ್ನು ಮತ್ತೊಮ್ಮೆ ಪರಿಶೀಲಿಸಲು ಸಿಎಂ ಸೂಚಿಸಿದ್ದಾರೆ. ಅನುಭವ ಮಂಟಪ ಸ್ಥಾಪನೆಗೆ ರೂ.100 ಕೋಟಿಗಳನ್ನು ಒದಗಿಸಲು ಸಭೆಯಲ್ಲಿ ನಿರ್ಧರಿಲಾಯಿತು.

ಆಧಾರ:ವಿಜಯವಾಣಿ, ದಿನಾಂಕ:27.05.2020